ನೇರ ನೇಮಕಾತಿಯ ಖಾಲಿ ಸ್ಥಾನಗಳ ಲಭ್ಯತೆಗೆ ಒಳಪಟ್ಟು ನೇಮಕಾತಿ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ತೀರ್ಥಹಳ್ಳಿ ಪುರಸಭೆ ವ್ಯಾಪ್ತಿಯಲ್ಲಿ ಅಕ್ರಮ ದಾಖಲೆ ಸೃಷ್ಟಿಸಿ ನಿವೇಶನ ವಶಪಡಿಸಿಕೊಳ್ಳಲು ಸಂಚು

1545 (1870) ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ಜಿಲ್ಲೆ, ತೀರ್ಥಹಳ್ಳಿ ಪುರಪಂಚಾಯ್ತಿ ವ್ಯಾಪ್ತಿಯಲ್ಲಿ ಅಕ್ರಮ ದಾಖಲೆ ಸೃಷ್ಟಿಸಿ ಬೆಲೆ ಬಾಳುವ ನಿವೇಶನಗಳನ್ನು ವಶಪಡಿಸಿಕೊಳ್ಳಲು ಸಂಚು ಮಾಡಿದ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ? ಈ ಬಗ್ಗೆ ಸರ್ಕಾರ ತನಿಖೆ ನಡೆಸಿದಲ್ಲಿ ತನಿಖಾ ವರದಿಯ ಸಾರಾಂಶವೇನು?

ಆ) ಈ ರೀತಿ ನಿವೇಶನ ಹಗರಣದ ತನಿಖಾ ವರದಿ ಬಂದು ಎಷ್ಟು ಸಮಯವಾಗಿದೆ? ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು?

ಶ್ರೀ ಎಸ್. ಕುಮಾರ ಬಂಗಾರಪ್ಪ (ಪೌರಾಡಳಿತ ರಾಜ್ಯ ಸಚಿವರು) :

ಅ) ಬಂದಿದೆ.

ಈ ವರದಿಯ ಸಾರಾಂಶವೇನೆಂದರೆ; ಹಕ್ಕುಪತ್ರಗಳನ್ನು ರದ್ದುಪಡಿಸಿ ಜಮೀನನ್ನು ಪುರಪಂಚಾಯಿತಿ ಸ್ವಾಧೀನಕ್ಕೆ ಹಿಂದಕ್ಕೆ ಪಡೆದುಕೊಂಡು, ತಪ್ಪಿತಸ್ತರ ಮೇಲೆ ನಿಯಮಾನುಸಾರ ಮೊಕದ್ದಮೆಯನ್ನು ದಾಖಲು ಮಾಡಬಹುದು.

ಆ) ದಿನಾಂಕ 27-10-2001 ರಂದು ಸರ್ಕಾರಕ್ಕೆ ತನಿಖಾ ವರದಿ ಬಂದಿದ್ದು, ಕೆಲವು ಮಾಹಿತಿ ಸ್ಪಷ್ಟೀಕರಣಕ್ಕಾಗಿ ಪಡೆಯಲಾಗುತ್ತಿದೆ. ಸದರಿ ಮಾಹಿತಿ ಬಂದ ನಂತರ ಈ ಬಗ್ಗೆ ಪರಿಶೀಲಿಸಲಾಗುವುದು.

ಪಟ್ಟಣಗೆರೆ ನಗರ ಸಭೆ ವ್ಯಾಪ್ತಿಯಲ್ಲಿ ಅಕ್ರಮವಾಗಿ ವಾಣಿಜ್ಯ ಕಟ್ಟಡವನ್ನು ಕಟ್ಟಿರುವುದು

1546 (1759) ಶ್ರೀ ಆರ್. ಅಶೋಕ್ (ಉತ್ತರಹಳ್ಳಿ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪಟ್ಟಣಗೆರೆ ನಗರಸಭೆಯ ವ್ಯಾಪ್ತಿಯ ಐಡಿಯಲ್ ಹೋಮ್ಸ್-ಮೌಂಟ್ ಕಾರ್ಮೆಲ್ ಸ್ಕೂಲ್‌ಗೆ ನೀಡಿರುವ ಸಿ.ಎ. ನಿವೇಶನದಲ್ಲಿ ವಾಣಿಜ್ಯ ಕಟ್ಟಡವನ್ನು ಕಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಕಟ್ಟಡವನ್ನು ಕಟ್ಟಲು ಅನುಮತಿ ನೀಡಿದ ಪ್ರಾಧಿಕಾರ ಯಾವುದು?

ಇ) ಅಕ್ರಮವಾಗಿ ಕಟ್ಟಿರುವ ಕಟ್ಟಡವನ್ನು ತೆರವು ಗೊಳಿಸಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು) :

ಅ) ಹೌದು

ಆ) ಯಾವುದೇ ಪ್ರಾಧಿಕಾರವೂ ಅನುಮತಿ ನೀಡಿರುವುದಿಲ್ಲ.

ಇ) ರಾಜರಾಜೇಶ್ವರಿ ನಗರಸಭೆಯಿಂದ ಮೌಂಟ್ ಕಾರ್ಮೆಲ್ ಶಾಲೆಯ ಪ್ರಿನ್ಸಿಪಾಲ್‌ರವರಿಗೆ ಕಾರಣ ಕೇಳುವ ನೋಟೀಸ್‌ನ್ನು ದಿನಾಂಕ 20-3-2002 ರಂದು ನೀಡಲಾಗಿದೆ ಮತ್ತು ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ತಿಳಿಸಲಾಗಿದೆ.